# <u>ಕರ್ನಾಟಕ ವಿಧಾನ ಪರಿಷತ್ತು</u>

**ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಹೆಚ್ ಎಸ್. ಗೋಪಿನಾಥ್, ಇವರು ನಿಯಮ-72 ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಉತ್ತರ.**

**<u>ವಿಷಯ:</u> ಬೆಂಗಳೂರು ನಗರ ಜಿಲ್ಲೆಯ ಹಲವು ಗ್ರಾಮಗಳ ವ್ಯಾಪ್ತಿಯ ಕಂದಾಯ ಭೂಮಿಗಳಲ್ಲಿ ನಿರ್ಮಿಸಲಾಗಿರುವ ಲೇಔಟ್‌ಗಳಲ್ಲಿ ಈಗಾಗಲೇ ಮಾರಾಟವಾಗಿ ನೋಂದಣಿಯಾಗಿರುವ ನಿವೇಶನಗಳಿಗೆ ಸರ್ಕಾರವು 'ಬಿ' ಖಾತಾವನ್ನು ನೀಡುತ್ತಾ ಬಂದಿದೆ. ಆದರೆ, ಇದೇ ಬಡಾವಣೆಗಳಲ್ಲಿ ಇನ್ನುಳಿದಿರುವ ಮತ್ತು ಇನ್ನೂ ನೋಂದಣಿಯಾಗದ ನಿವೇಶನಗಳಿಗೆ ಸರ್ಕಾರವು ಪ್ರಸ್ತುತ 'ಬಿ' ಖಾತಾವನ್ನು ನೀಡಲು ಸಂಪೂರ್ಣವಾಗಿ ನಿರಾಕರಿಸುತ್ತಿದೆ. ಈಗಾಗಲೇ ಸಾರ್ವಜನಿಕರು ನಿವೇಶನಗಳನ್ನು ಖರೀದಿಸಿ, ಮನೆ ಮತ್ತು ಕಟ್ಟಡಗಳನ್ನು ನಿರ್ಮಿಸಿರುವಂತಹ ಕಟ್ಟಡಗಳಿಗೆ ಮತ್ತು ವಿದ್ಯುಚ್ಛಕ್ತಿ, ಕುಡಿಯುವ ನೀರು ಚರಂಡಿ ವ್ಯವಸ್ಥೆ ನೀಡಲಾಗುತ್ತಿಲ್ಲ. ಆದಕಾರಣ ಬೆಂಗಳೂರು ನಗರ ಜಿಲ್ಲೆಯ ಗ್ರಾಮಾಂತರ ಪ್ರದೇಶದ ಈ ಗಂಭೀರ ಸಮಸ್ಯೆಯನ್ನು ಪರಿಗಣಿಸಿ ಸರ್ಕಾರವು ಕೂಡಲೇ ಬಗೆಹರಿಸಿಕೊಡುವ ಬಗ್ಗೆ.**

**<u>ಉತ್ತರ</u>:** ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025 ಅನ್ನು ದಿನಾಂಕ: 07.04.2025 ರಂದು ಅಧಿಸೂಚಿಸಲಾಗಿರುತ್ತದೆ. ಈ ತಿದ್ದುಪಡಿ ಅಧಿನಿಯಮದಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ 199ಎ ಪ್ರಕರಣದ ತರುವಾಯ 199ಬಿ ಮತ್ತು 199ಸಿ ಹೊಸ ಪ್ರಕರಣಗಳನ್ನು ಸೇರ್ಪಡೆ ಮಾಡಲಾಗಿರುತ್ತದೆ.

ಅಧಿನಿಯಮದ ಪ್ರಕರಣ 199ಸಿ ರಲ್ಲಿ, ಗ್ರಾಮ ಪಂಚಾಯಿತಿಯು ಮಾದರಿ ಕಟ್ಟಡ ಉಪ ವಿಧಿಗಳ ಉಪಬಂಧಗಳನ್ನು ಉಲ್ಲಂಘಿಸಿ ನಿರ್ಮಿಸಲಾದ ಕಟ್ಟಡ ಅಥವಾ ಪರಿವರ್ತನೆಯಾಗದಿರುವ ಭೂಮಿ ಅಥವಾ ಪರಿವರ್ತನೆಯಾದ ಭೂಮಿ ಆದರೆ ಕಂದಾಯ ಭೂಮಿಯ ಮೇಲಿನ ಅನುಮೋದಿತವಲ್ಲದ ಲೇಔಟ್ ಅಥವಾ ಅಧಿಭೋಗ ಅಥವಾ ಪೂರ್ಣಗೊಳಿಸಿದ ಪ್ರಮಾಣ ಪತ್ರವನ್ನು ಪಡೆಯದೆ ಸ್ವಾಧೀನ ಪಡಿಸಿಕೊಂಡ ಕಟ್ಟಡವನ್ನು ಒಳಗೊಂಡು ಪ್ರತಿಯೊಂದು ಕಟ್ಟಡ, ಖಾಲಿ ಭೂಮಿ ಅಥವಾ ಅವೆರಡರಿಂದಲೂ, ಈ ಉಪಬಂಧವನ್ನು ಸೇರಿಸಲಾದ ದಿನಾಂಕಕ್ಕೆ ಮೊದಲು ಸೃಜಿಸಲಾದ ಸ್ವತ್ತುಗಳಿಗೆ ಮಾತ್ರ, ಸರ್ಕಾರಿ ಭೂಮಿ ಅರಣ್ಯ ಭೂಮಿ, ಸರ್ಕಾರದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಸ್ಥಳೀಯ ನಿಕಾಯ, ಯಾವುದೇ ಶಾಸನಬದ್ಧ ನಿಕಾಯ ಅಥವಾ ಸಂಸ್ಥೆಗೆ ಸೇರಿದ ಭೂಮಿಯನ್ನು ಹೊರತುಪಡಿಸಿ ಸ್ವತ್ತು ತೆರಿಗೆಯನ್ನು ವಿಧಿಸಬಹುದು ಮತ್ತು ಸಂಗ್ರಹಿಸಬಹುದು.

ಅಂಥ ಕಟ್ಟಡ ಅಥವಾ ನಿವೇಶನಕ್ಕಾಗಿ ವಿಧಿಸಿದ ಸ್ವತ್ತು ತೆರಿಗೆಯು ಮೊದಲ ವರ್ಷಕ್ಕಾಗಿ ಪಾವತಿಸಬೇಕಾದ ತೆರಿಗೆಯು ಎರಡು ಪಟ್ಟಾಗಿರತಕ್ಕದ್ದು ಮತ್ತು ತರುವಾಯ ವರ್ಷಗಳಿಗಾಗಿ ಸ್ವತ್ತು ತೆರಿಗೆಯನ್ನು ಮಾತ್ರ ವಿಧಿಸತಕ್ಕದ್ದು, ಅದನ್ನು ಪ್ರತ್ಯೇಕ ರಿಜಿಸ್ಟರಿನಲ್ಲಿ ನಿರ್ವಹಿಸತಕ್ಕದ್ದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025 ರ ಪ್ರಾರಂಭದ ದಿನಾಂಕದ ತರುವಾಯ ರಿಜಿಸ್ಟರ್ ನಲ್ಲಿ ಯಾವುದೇ ಹೊಸ ಸ್ವತ್ತನ್ನು ನಮೂದಿಸತಕ್ಕದ್ದಲ್ಲ; ಎಂದು ಅಧಿಸೂಚಿಸಲಾಗಿರುತ್ತದೆ.

ಮುಂದುವರೆದು, ಮೇಲ್ಕಂಡ ತಿದ್ದುಪಡಿ ಅಧಿನಿಯಮದನ್ವಯ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ತೆರಿಗೆ, ದರ ಮತ್ತು ಶುಲ್ಕಗಳು) ನಿಯಮಗಳು, 2025 ರ ನಿಯಮ 8 (2) (IV) ರನ್ವಯ ಬಡಾವಣೆ ವಿನ್ಯಾಸ ಅನುಮೋದನೆಯಿಲ್ಲದ, ಆದರೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ, ಉದ್ಯಾನವನ, ನಾಗರೀಕ ಸೌಕರ್ಯ ನಿವೇಶನ, ರಸ್ತೆಗಳನ್ನು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಿಯಮ, 1961 ರ ಪ್ರಕರಣ 17 ರನ್ವಯ ಗ್ರಾಮ ಪಂಚಾಯತಿಗೆ ಉಚಿತವಾಗಿ ಪರಿತ್ಯಾಜನಾ ಪತ್ರದ ಮೂಲಕ ವರ್ಗಾಯಿಸಿರುವ/ ವರ್ಗಾಯಿಸಿಕೊಂಡು ಕಂದಾಯ ಭೂಮಿ/ ಭೂ ಪರಿವರ್ತಿತ ಜಮೀನಿನಲ್ಲಿರುವ ನಿವೇಶನಗಳು ಮತ್ತು ಕಟ್ಟಡಗಳು. ಈ ಬಡಾವಣೆಯಲ್ಲಿ ಈಗಾಗಲೇ ವರ್ಗಾವಣೆಗೆ ಒಳಪಟ್ಟಿರುವ ನಿವೇಶನಗಳನ್ನು ಹೊರತುಪಡಿಸಿ ಉಳಿಕೆ ಜಾಗವನ್ನು ಮಾಲೀಕನ ಹೆಸರಿನಲ್ಲಿನ ಏಕ ನಿವೇಶನವೆಂದು ಪರಿಗಣಿಸುವುದು.

ಪರಂತು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ಅಧಿನಿಯಮ, 2025 ರ ಅಧಿಸೂಚಿತ ದಿನಾಂಕಕ್ಕೆ ಪೂರ್ವದಲ್ಲಿ ತೆರಿಗೆ ವ್ಯಾಪ್ತಿಗೆ ಒಳಪಡದ ಖಾಲಿ ನಿವೇಶನಗಳನ್ನು ಈಗಾಗಲೇ ಅಭಿವೃದ್ಧಿಪಡಿಸಲಾದ ಬಡಾವಣೆಯಲ್ಲಿ ಮೂಲ ಮಾಲೀಕರ ಹೆಸರಿನಲ್ಲಿರುವ ಕಂದಾಯ ಜಮೀನಿಲ್ಲಿ ನಿವೇಶನಗಳೆಂಬ ಕಾರಣಕ್ಕಾಗಿ ಪ್ರಸ್ತುತ ತೆರಿಗೆ ವ್ಯಾಪ್ತಿಗೆ ಒಳಪಡಿಸಲು ಅವಕಾಶ ಇರುವುದಿಲ್ಲ ಎಂದು ದಿನಾಂಕ:17.10.2025 ರಲ್ಲಿ, ಅಧಿಸೂಚಿಸಲಾಗಿರುತ್ತದೆ.

ಆದರಂತೆ ಕಂದಾಯ ಭೂಮಿಯಲ್ಲಿ ವಿನ್ಯಾಸ ಅನುಮೋದನೆ ಇಲ್ಲದ ಬಡಾವಣೆಗಳಲ್ಲಿ ನೋಂದಣಿ ಆಗದ ನಿವೇಶನಗಳ ಬಗ್ಗೆ ಕ್ರಮ ವಹಿಸಬಹುದಾಗಿರುತ್ತದೆ.

ಸಂಖ್ಯೆ:RDPR 255 GPA 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು.